## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 98 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಮುನಿರಾಜು ಗೌಡ ಪಿ.ಎಂ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 04.12.2023 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಹೊಸದಾಗಿ ಪಡಿತರ ಚೀಟಿಗೆ ಅರ್ಜಿ ಸಲ್ಲಿಸುವುದನ್ನು ಸ್ಥಗಿತಗೊಳಿಸಲಾಗಿದೆಯೆ ಸ್ಥಗಿತಗೊಳಿಸಲಾಗಿದ್ದಲ್ಲಿ ಸ್ಥಗಿತಗೊಳಿಸಲು ಕಾರಣಗಳೇನು; | ರಾಜ್ಯದಲ್ಲಿ ಹೊಸ ಆದ್ಯತಾ ಪಡಿತರ ಚೀಟಿಯನ್ನು ಕೋರಿ ಸಲ್ಲಿಕೆಯಾಗಿರುವ 2,95,986 ಅರ್ಜಿಗಳನ್ನು ವಿಲೇವಾರಿ ಮಾಡಲು ಸರ್ಕಾರದ ಆದೇಶ ಸಂಖ್ಯೆ:ಆನಾಸ 211 ಡಿಆರ್ಎ 2021, ದಿನಾಂಕ: 29.09.2023 ರಲ್ಲಿ ಅನುಮೋದನೆ ನೀಡಲಾಗಿದೆ. ಆದ್ಯತಾ ಪಡಿತರ ಚೀಟಿಯನ್ನು ಕೋರಿ ಸಲ್ಲಿಸಿರುವ ಅರ್ಜಿಗಳಲ್ಲಿನ ಮಾಹಿತಿಯ ಸತ್ಯಾಸತ್ಯತೆ ಹಾಗೂ ವಾಸಸ್ಥಳ ಪರಿಶೀಲನೆ ಕೈಗೊಂಡು ಅರ್ಹ ಅರ್ಜಿದಾರರಿಗೆ ಅರ್ಜಿ ಸಲ್ಲಿಸಿರುವ ದಿನಾಂಕದ ಹಿರಿತನದ ಮೇಲೆ ಪಡಿತರ ಚೀಟಿಯನ್ನು ವಿಲೇವಾರಿ ಮಾಡಲು ಅನುಮೋದನೆ ನೀಡಿರುವಂತೆ ಈವರೆಗೂ 19,889 ಆದ್ಯತಾ ಪಡಿತರ ಚೀಟಿಗಳನ್ನು ವಿತರಿಸಲಾಗಿದ್ದು, ಉಳಿದ ಅರ್ಜಿಗಳನ್ನು ವಿಲೇವಾರಿ ಮಾಡುವ ಕಾರ್ಯ ಪ್ರಗತಿಯಲ್ಲಿದೆ. ಹಾಗೂ ತುರ್ತು ವೈದ್ಯಕೀಯ ಚಿಕಿತ್ಸೆಗಾಗಿ ಆದ್ಯತಾ ಪಡಿತರ ಚೀಟಿ ಕೋರಿ ಸಲ್ಲಿಕೆಯಾಗಿರುವ/ಆಗುವ ಅರ್ಜಿಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡ ಅಂಶಗಳನ್ನು ಪರಿಗಣಿಸಿ ಆದ್ಯತಾ ಪಡಿತರ ಚೀಟಿ ವಿತರಿಸಲು ಆಯಾ ಜಿಲ್ಲೆಯ ಜಂಟಿ/ಉಪ ನಿರ್ದೇಶಕರುಗಳ ವರದಿಯ ಮೇರೆಗೆ ಪಡಿತರ ಚೀಟಿಯನ್ನು ವಿತರಿಸಲು ಅನುಮೋದನೆ ನೀಡಲಾಗಿದೆ. ಈವರೆಗೆ ತುರ್ತು ವೈದ್ಯಕೀಯ ಪ್ರಕರಣಗಳಿಗೆ ಸಂಬಂಧಿಸಿದಂತೆ ದಿನಾಂಕ: 21.11.2023 ರ ಅಂತ್ಯಕ್ಕೆ ಒಟ್ಟು 744 ಆದ್ಯತಾ ಪಡಿತರ ಚೀಟಿಗಳನ್ನು ವಿತರಣೆ ಮಾಡಲಾಗಿರುತ್ತದೆ.<br>• ನಿರ್ದಿಷ್ಟವಾದ ತುರ್ತು ವೈದ್ಯಕೀಯ ಚಿಕಿತ್ಸೆಗಾಗಿ ಮಾತ್ರ |
| ಆ | ಹೊಸದಾಗಿ ಪಡಿತರ ಚೀಟಿಗೆ ಅರ್ಜಿ ಸಲ್ಲಿಸಲು ಎಂದಿನಿಂದ ಕಾಲಾವಕಾಶ ನೀಡಲಾಗುವುದು; | |
| ಇ | ಪಡಿತರ ಚೀಟಿಗಾಗಿ ಈ ಹಿಂದೆ ಅರ್ಜಿ ಸಲ್ಲಿಸಿ ಪಡಿತರ ಚೀಟಿ ವಿತರಣೆಯಾಗದೆ ಬಾಕಿಯಿರುವ ಅರ್ಜಿಗಳ ಸಂಖ್ಯೆ ಎಷ್ಟು: | |

| | | |
|---|---|---|
| | | ಆದ್ಯತಾ ಪಡಿತರ ಚೀಟಿಯನ್ನು ವಿತರಿಸಲು.<br>• ಅರ್ಜಿದಾರರು ಅಂತ್ಯೋದಯ ಅನ್ನ ಯೋಜನೆ/ ಆದ್ಯತಾ ಪಡಿತರ ಚೀಟಿಯನ್ನು ಹೊಂದಲು ಅರ್ಹರಿರಬೇಕು. |
| ಈ | ಸದರಿ ಅರ್ಜಿಗಳ ವಿಲೇವಾರಿಗೆ ಸರ್ಕಾರ ಕೈಗೊಂಡ ಕ್ರಮಗಳೇನು: (ಜಿಲ್ಲಾವಾರು ವಿವರ ನೀಡುವುದು) | ರಾಜ್ಯದಲ್ಲಿ ಹೊಸ ಆದ್ಯತಾ ಪಡಿತರ ಚೀಟಿಯನ್ನು ಕೋರಿ ಸಲ್ಲಿಕೆಯಾಗಿರುವ 2,95,986 ಅರ್ಜಿಗಳನ್ನು ವಿಲೇವಾರಿ ಮಾಡಲು ಸರ್ಕಾರದ ಆದೇಶ ಸಂಖ್ಯೆ ಆನಾಸ 211 ಡಿಆರ್ಎ 2021 ದಿನಾಂಕ: 29.09.2023 ರಲ್ಲಿ ಅನುಮೋದನೆ ನೀಡಲಾಗಿದ್ದು, ಹೊಸ ಆದ್ಯತಾ ಪಡಿತರ ಚೀಟಿಗಳ ವಿಲೇವಾರಿ ಕಾರ್ಯ ಪ್ರಗತಿಯಲ್ಲಿರುತ್ತದೆ.<br>ಜಿಲ್ಲಾವಾರು ವಿವರಗಳನ್ನು ಅನುಬಂಧ-01 ರಲ್ಲಿ ಒದಗಿಸಲಾಗಿದೆ. |
| ಉ | ತುರ್ತು ಸಂದರ್ಭದಲ್ಲಿ ವೈದ್ಯಕೀಯ ಅವಶ್ಯಕತೆ ಮತ್ತು ಭಾಗ್ಯ ಲಕ್ಷ್ಮಿ ಬಾಂಡ್ ಪಡೆಯಲು ಪಡಿತರ ಚೀಟಿ ಇಲ್ಲದೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ತುರ್ತು ವೈದ್ಯಕೀಯ ಚಿಕಿತ್ಸೆಗಾಗಿ ಆದ್ಯತಾ ಪಡಿತರ ಚೀಟಿ ಕೋರಿ ಸಲ್ಲಿಕೆಯಾಗಿರುವ/ಆಗುವ ಅರ್ಜಿಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡ ಅಂಶಗಳನ್ನು ಪರಿಗಣಿಸಿ ಆದ್ಯತಾ ಪಡಿತರ ಚೀಟಿ ವಿತರಿಸಲು ಆಯಾ ಜಿಲ್ಲೆಯ ಜಂಟಿ/ಉಪ ನಿರ್ದೇಶಕರುಗಳ ವರದಿಯ ಮೇರೆಗೆ ಪಡಿತರ ಚೀಟಿಯನ್ನು ವಿತರಿಸಲು ಅನುಮೋದನೆ ನೀಡಲಾಗಿದೆ.<br>• ನಿರ್ದಿಷ್ಟವಾದ ತುರ್ತು ವೈದ್ಯಕೀಯ ಚಿಕಿತ್ಸೆಗಾಗಿ ಮಾತ್ರ ಆದ್ಯತಾ ಪಡಿತರ ಚೀಟಿಯನ್ನು ವಿತರಿಸಲು.<br>• ಅರ್ಜಿದಾರರು ಅಂತ್ಯೋದಯ ಅನ್ನ ಯೋಜನೆ/ ಆದ್ಯತಾ ಪಡಿತರ ಚೀಟಿಯನ್ನು ಹೊಂದಲು ಅರ್ಹರಿರಬೇಕು. |
| ಊ | ಬಂದಿದ್ದಲ್ಲಿ ಈ ತೊಂದರೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | |

ಆನಾಸ 250 ಡಿಆರ್ಎ 2023 (ಇ-ಆಫೀಸ್)

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 98

## ಅನುಬಂಧ -01

| Sl. No. | District | Pending |
|---|---|---|
| 1 | BAGALKOTE | 11563 |
| 2 | BALLARI | 8946 |
| 3 | BANGALORE EAST | 5873 |
| 4 | BANGALORE NORTH | 5112 |
| 5 | BANGALORE SOUTH | 4464 |
| 6 | BANGALORE WEST | 10095 |
| 7 | BELAGAVI | 27486 |
| 8 | BENGALURU | 13841 |
| 9 | BENGALURU RURAL | 5403 |
| 10 | BIDAR | 12930 |
| 11 | CHAMARAJANAGARA | 4583 |
| 12 | CHIKKABALLAPURA | 5697 |
| 13 | CHIKKAMAGALURU | 3758 |
| 14 | CHITRADURGA | 6134 |
| 15 | DAKSHINA KANNADA | 5526 |
| 16 | DAVANAGERE | 4906 |
| 17 | DHARWAR | 13992 |
| 18 | GADAG | 9691 |
| 19 | HASSAN | 5022 |
| 20 | HAVERI | 10465 |
| 21 | KALABURAGI | 20303 |
| 22 | KODAGU | 2121 |
| 23 | KOLAR | 4507 |
| 24 | KOPPAL | 8013 |
| 25 | MANDYA | 5023 |
| 26 | MYSURU | 8317 |
| 27 | RAICHUR | 12587 |
| 28 | RAMANAGARA | 3253 |
| 29 | SHIVAMOGGA | 6025 |
| 30 | TUMAKURU | 7822 |
| 31 | UDUPI | 4219 |
| 32 | UTTARA KANNADA | 7427 |
| 33 | VIJAYANAGARA | 7254 |
| 34 | VIJAYAPURA | 17261 |
| 35 | YADGIR | 6367 |
| | | |
| **TOTAL** | | **295986** |

ಅಪರ ನಿರ್ದೇಶಕರು (ಐಟಿ)